ಜೆಎಸ್‌ಎಸ್ ಮಹಾವಿದ್ಯಾಪೀಠ

**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

ESTD - 1964

ಊಟಿರಸ್ತೆ, ಮೈಸೂರು-೫೭೦ ೦೨೫

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ : 18-10-2016

## ಪ್ರಕಟಣೆಯ ಕೃಪೆಗಾಗಿ

### 'ಸೇವಾ ಮಾದರಿಯ ಶಿಕ್ಷಣವನ್ನು ನೀಡುತ್ತಿರುವ ಜೆಎಸ್‌ಎಸ್ ಸಂಸ್ಥೆಗಳು'

-ಪ್ರೊ. ಕೆ.ಎಸ್. ರಂಗಪ್ಪ

ಮೈಸೂರಿನ ಬಿ.ಎನ್. ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಏರ್ಪಡಿಸಿದ್ದ ಪ್ರಥಮ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳ ಸ್ವಾಗತ ಮತ್ತು ಪರಿಚಯ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಕೆ.ಎಸ್. ರಂಗಪ್ಪ ಅವರು ಮಾತನಾಡುತ್ತಾ, 'ಇಂದು ಕೆಲವು ಶೈಕ್ಷಣಿಕ ಸಂಸ್ಥೆಗಳು ಕೇವಲ ವ್ಯವಹಾರಿಕವಾಗಿ ಹಣಗಳಿಕೆಯ ಉದ್ದೇಶದಿಂದ ಸಂಸ್ಥೆಗಳನ್ನು ನಡೆಸುತ್ತಿರುವ ಕಾಲದಲ್ಲಿ, ಜೆಎಸ್‌ಎಸ್ ಸಂಸ್ಥೆಗಳು ಸಮಾಜಕ್ಕೆ ಮೌಲ್ಯಯುತವಾದ ಶಿಕ್ಷಣವನ್ನು ಸೇವಾ ಮನೋಭಾವದಿಂದ ನೀಡುತ್ತಾ ಮುನ್ನಡೆಯುತ್ತಿರುವುದು ಅಭಿಮಾನದ ಸಂಗತಿ. ಸೇವಾ ಹಿನ್ನೆಲೆಯಲ್ಲಿ ನಡೆಯುವ ಶಿಕ್ಷಣ ಸಂಸ್ಥೆಗಳನ್ನು ನಿರ್ವಹಿಸಿಕೊಂಡು ಬರುವುದು ಕಷ್ಟ. ಆದರೂ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ೧೨ ಸ್ನಾತಕೋತ್ತರ ಮತ್ತು ೭ ಸಂಶೋಧನಾ ಕೇಂದ್ರಗಳ ಜೊತೆಗೆ ಕೌಶಲ್ಯ ಆಧಾರಿತ ಕೋರ್ಸ್‌ಗಳನ್ನು ಸಹ ನಡೆಸುತ್ತಿರುವುದು ಒಂದು ವಿಶ್ವವಿದ್ಯಾಲಯ ಕಾರ್ಯವ್ಯಾಪ್ತಿಯನ್ನು ಪ್ರತಿನಿಧಿಸುವಂತೆ ಇದೆ' ಎಂದು ಅಭಿಪ್ರಾಯಪಟ್ಟರು.

ಮುಂದುವರೆದು ಮಾತನಾಡುತ್ತಾ, 'ಪ್ರಸ್ತುತ ಕಾಲೇಜು ಉನ್ನತ ಶಿಕ್ಷಣಕ್ಕೆ ಪೂರಕವಾದ ಸುಸಜ್ಜಿತವಾದ ಗ್ರಂಥಾಲಯ, ಪ್ರಯೋಗಾಲಯಗಳು ಮತ್ತು ಅನುಭವಿ ಅಧ್ಯಾಪಕ ವೃಂದವನ್ನು ಹೊಂದಿದ್ದು ಗುಣಾತ್ಮಕ ಶಿಕ್ಷಣಕ್ಕೆ ಪೂರಕವಾದ ವಾತಾವರಣವಿದೆ. ಶೈಕ್ಷಣಿಕ ಗುಣಮಟ್ಟದಲ್ಲಿ ಇದುವರೆಗೂ ಯಾವುದೇ ರೀತಿಯ ರಾಜಿಯನ್ನು ಮಾಡಿಕೊಳ್ಳದೆ ಸಂಸ್ಥೆ ಅತ್ಯುನ್ನತ ಮಟ್ಟದಲ್ಲಿದೆ. ಇದು ಇತರ ಶೈಕ್ಷಣಿಕ ಸಂಸ್ಥೆಗಳಿಗೆ ಮಾದರಿ' ಎಂದರು.

ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತಿಸಿದರು. ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ವಂದಿಸಿದರು. ಕಾರ್ಯಕ್ರಮದಲ್ಲಿ ವಾಣಿಜ್ಯ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರಾದ ಡಾ. ಎಚ್.ಸಿ. ಹೊನ್ನಪ್ಪನವರು ಮತ್ತು ಸಮಾಜಕಾರ್ಯ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರಾದ ಡಾ. ಎಂ.ಪಿ. ಸೋಮಶೇಖರ್‌ರವರು ಉಪಸ್ಥಿತರಿದ್ದರು. ಡಾ. ಬಿ.ವಿ. ಲತಾ ಅವರು ಕಾರ್ಯಕ್ರಮ ನಿರೂಪಿಸಿದರು. ವಿದ್ಯಾರ್ಥಿನಿ ಕು. ಎಂ.ಕೆ. ಕಾವ್ಯ ಪ್ರಾರ್ಥಿಸಿದರು.

(ಪ್ರೊ. ಎಂ. ಮಹದೇವಪ್ಪ)
**ಪ್ರಾಂಶುಪಾಲರು**
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025

ಗೆ,

ಸಂಪಾದಕರು

________________

________________